# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 07.05.2026 / 6.40 p.m.
***************

ಮುಖ್ಯಾಂಶಗಳು

೧. ಐದನೇ ಬ್ರಿಕ್ಸ್ ಎಸ್‌ಎಐ ನಾಯಕರ ಶೃಂಗಸಭೆ; ಬೆಂಗಳೂರಿನಲ್ಲಿ ಭಾರತದ ನಿಯಂತ್ರಕ ಮತ್ತು ಮಹಾಲೇಖಪಾಲ ಕೆ. ಸಂಜಯ್ ಮೂರ್ತಿ ಉದ್ಘಾಟನೆ

೨. ಆರೋಗ್ಯ ಸೌಧದಲ್ಲಿ ಅತ್ಯಾಧುನಿಕ 'ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರ' ಉದ್ಘಾಟಿಸಿದ ಸಚಿವ ದಿನೇಶ್ ಗುಂಡೂರಾವ್

೩. ಆಕಾಶವಾಣಿಯ ೯೦ ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ ನಾಳೆ ಬೆಂಗಳೂರಿನಲ್ಲಿ ವಾಕಥಾನ್-೨೦೨೬ ಆಯೋಜನೆ

೪. ಬ್ಯಾಂಕ್ ಸಾಲದ ಕಠಿಣ ನಿಯಮಗಳ ವಿರುದ್ಧ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಅಸಮಾಧಾನ - ಆರ್‌ಬಿಐಗೆ ಮನವಿ ಸಲ್ಲಿಕೆ

---

ಭಾರತದ ಅಧ್ಯಕ್ಷತೆಯಲ್ಲಿ "ನಗರ ಸಂಚಾರ ವ್ಯವಸ್ಥೆಯ ಮೇಲೆ ಗಮನದೊಂದಿಗೆ ಜೀವನ ಸುಗಮತೆ" ಎಂಬ ಆಶಯದೊಂದಿಗೆ ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ೫ನೇ ಬ್ರಿಕ್ಸ್ ಸುಪ್ರೀಂ ಆಡಿಟ್ ಇನ್ಸ್ಟಿಟ್ಯೂಷನ್ಸ್ - ಎಸ್‌ಎಐ ನಾಯಕರ ಶೃಂಗಸಭೆಯನ್ನು ಇಂದು ಭಾರತದ ನಿಯಂತ್ರಕರು ಮತ್ತು ಮಹಾಲೇಖಪಾಲರಾದ ಕೆ. ಸಂಜಯ್ ಮೂರ್ತಿ ಉದ್ಘಾಟಿಸಿದರು.

ಈ ಸಮಾವೇಶದಲ್ಲಿ ಬ್ರೆಜಿಲ್, ರಷ್ಯಾ, ಚೀನಾ, ದಕ್ಷಿಣ ಆಫ್ರಿಕಾ ಸೇರಿದಂತೆ ಒಂಬತ್ತು ಸದಸ್ಯ ರಾಷ್ಟ್ರಗಳ ೪೨ ಪ್ರತಿನಿಧಿಗಳು ಭಾಗವಹಿಸಿದ್ದು, ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳಲ್ಲಿನ ಸಾರಿಗೆ, ವಸತಿ ಮತ್ತು ಸುಸ್ಥಿರ ಅಭಿವೃದ್ಧಿಯ ಸವಾಲುಗಳನ್ನು ಎದುರಿಸುವಲ್ಲಿ ಲೆಕ್ಕಪರಿಶೋಧನಾ ಸಂಸ್ಥೆಗಳ ಪಾತ್ರದ ಕುರಿತು ಚಿಂತನ - ಮಂಥನ ನಡೆಸುತ್ತಿದ್ದಾರೆ.

ಎರಡು ದಿನಗಳ ಈ ಸಭೆಯಲ್ಲಿ ದತ್ತಾಂಶ ಆಧಾರಿತ ಲೆಕ್ಕಪರಿಶೋಧನೆ, ಆಧುನಿಕ ತಂತ್ರಜ್ಞಾನದ ಬಳಕೆ ಹಾಗೂ ನಾಗರಿಕ ಕೇಂದ್ರಿತ ಮೌಲ್ಯಮಾಪನ ವಿಧಾನಗಳ ಕುರಿತು ವಿವಿಧ ರಾಷ್ಟ್ರಗಳ

ತಜ್ಞರು ವಿಚಾರ ಮಂಡಿಸುತ್ತಿದ್ದಾರೆ. ಸಮಾವೇಶವು ನಾಳೆ "ಬೆಂಗಳೂರು ಘೋಷಣಾ ಪತ್ರ ಹಾಗೂ ಮುಂದಿನ ಎರಡು ವರ್ಷಗಳ ಕಾರ್ಯಯೋಜನೆಯನ್ನು ಅಂಗೀಕರಿಸುವುದರೊಂದಿಗೆ ಮುಕ್ತಾಯಗೊಳ್ಳಲಿದೆ.

---

ರಾಜ್ಯದ ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಹೆಜ್ಜೆಯಾಗಿ, ಬೆಂಗಳೂರಿನ ಆರೋಗ್ಯ ಸೌಧದಲ್ಲಿ ಅತ್ಯಾಧುನಿಕ 'ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರ'ವನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಇಂದು ಉದ್ಘಾಟಿಸಿದರು.

ಈ ಕೇಂದ್ರವು ರಾಜ್ಯಾದ್ಯಂತ ಸಂಭವಿಸುವ ಆರೋಗ್ಯ ತುರ್ತು ಪರಿಸ್ಥಿತಿಗಳು, ಸಾಂಕ್ರಾಮಿಕ ರೋಗಗಳು ಮತ್ತು ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ಸಮನ್ವಯ ಸಾಧಿಸುವ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.

ದಿನದ ೨೪ ಗಂಟೆಯೂ ನಿರಂತರ ಕಣ್ಗಾವಲು ವ್ಯವಸ್ಥೆ ಮತ್ತು ಸಮಗ್ರ ಸಂವಹನ ಮೂಲಸೌಕರ್ಯವನ್ನು ಹೊಂದಿರುವ ಈ ಕೇಂದ್ರ, ತುರ್ತು ಸಂದರ್ಭಗಳಲ್ಲಿ ತ್ವರಿತ ನಿರ್ಧಾರ ಕೈಗೊಳ್ಳಲು ನೆರವಾಗಲಿದೆ.

ಇದು ಆರೋಗ್ಯ ಇಲಾಖೆ, ವಿಪತ್ತು ನಿರ್ವಹಣಾ ಪ್ರಾಧಿಕಾರಗಳು ಮತ್ತು ಜಿಲ್ಲಾಡಳಿತಗಳ ನಡುವೆ ದಕ್ಷ ಸಮನ್ವಯ ಸಾಧಿಸಲು ಸಹಕಾರಿಯಾಗಿದೆ. ರಾಷ್ಟ್ರೀಯ ಕಾರ್ಯಕ್ರಮದಡಿ ಇಂತಹ ಮುಂದುವರಿದ ವ್ಯವಸ್ಥೆಯನ್ನು ಅಳವಡಿಸಿಕೊಂಡ ದೇಶದ ಮೊದಲ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದ್ದು, ಸುರಕ್ಷಿತ ರಾಜ್ಯ ನಿರ್ಮಾಣದ ಸರ್ಕಾರದ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತದೆ ಎಂದು ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

---

ಬೆಂಗಳೂರು ಉತ್ತರ ಪಾಲಿಕೆ ಕಚೇರಿ ನೂತನ ಕಟ್ಟಡ ನಿರ್ಮಾಣ ಸಂಬಂಧ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸೌಧದಲ್ಲಿಂದು ಅಧಿಕಾರಿಗಳ ಸಭೆ ನಡೆಸಿದರು.

ಈ ವೇಳೆ, ಸಚಿವರಾದ ಕೆ.ಜೆ.ಜಾರ್ಜ್, ಕೃಷ್ಣಬೈರೇಗೌಡ, ಚಲುವರಾಯಸ್ವಾಮಿ, ಪ್ರಿಯಾಂಕ್ ಖರ್ಗೆ, ವೆಂಕಟೇಶ್, ಬೈರತಿ ಸುರೇಶ್, ಎಂ.ಸಿ. ಸುಧಾಕರ್, ಬೆಂಗಳೂರು ಉತ್ತರ ಪಾಲಿಕೆ ಆಯುಕ್ತ ಪೊಮ್ಮಲ ಸುನಿಲ್ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ, ಬೆಂಗಳೂರು ಉತ್ತರ ಪಾಲಿಕೆ ಕಚೇರಿ ನೂತನ ಕಟ್ಟಡ ನಿರ್ಮಾಣಕ್ಕೆ ಸ್ಥಳದ ಕುರಿತು ಸಚಿವರು ಹಾಗೂ ಅಧಿಕಾರಿಗಳ ಪ್ರಸ್ತಾವನೆ ಹಾಗೂ ಅಭಿಪ್ರಾಯಗಳನ್ನು ಸ್ವೀಕರಿಸಿದ್ದು, ಆಯಾ ಸ್ಥಳಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

---

ಬೆಂಗಳೂರು ಆಕಾಶವಾಣಿ ಕೇಂದ್ರವು ತನ್ನ ವೈಭವಯುತ ೯೦ ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ ನಾಳೆ 'ವಾಕಥಾನ್-೨೦೨೬' ಎಂಬ ವಿಶೇಷ ಜಾಥಾವನ್ನು ಆಯೋಜಿಸಿದೆ.

'೯೦ ವರ್ಷಗಳ ಸಾರ್ಥಕ ಧ್ವನಿ: ಸಂಸ್ಕೃತಿ ಹಾಗೂ ಸದಭಿರುಚಿಯ ಸಂಪರ್ಕ ಸೇತು' ಎಂಬ ಘೋಷವಾಕ್ಯದೊಂದಿಗೆ ನಡೆಯಲಿರುವ ಈ ಜಾಥಾ ಬೆಳಿಗ್ಗೆ ೬:೩೦ಕ್ಕೆ ಬೆಂಗಳೂರಿನ ರಾಜಭವನ ರಸ್ತೆಯಲ್ಲಿರುವ ಆಕಾಶವಾಣಿ ಕೇಂದ್ರದಿಂದ ಪ್ರಾರಂಭವಾಗಲಿದೆ. ಈ ನಡಿಗೆಯು ಕಬ್ಬನ್ ಪಾರ್ಕ್ ಮೂಲಕ ವಿಧಾನ ಸೌಧದ ಮಾರ್ಗವಾಗಿ ಸಾಗಲಿದೆ.

ದಶಕಗಳ ಕಾಲ ನಾಡಿನ ಕಲೆ, ಸಾಹಿತ್ಯ ಮತ್ತು ಪರಂಪರೆಯನ್ನು ಮನೆಮನೆಗೆ ತಲುಪಿಸಿದ ಆಕಾಶವಾಣಿಯ ಮೈಲಿಗಲ್ಲನ್ನು ಸ್ಮರಿಸಲು ಈ ವಾಕಥಾನ್ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಎಲ್ಲರಿಗೂ ಆತ್ಮೀಯ ಆಹ್ವಾನ ನೀಡಲಾಗಿದೆ.

ನಾಡಿನ ಸಂಸ್ಕೃತಿ ಮತ್ತು ಸಾರ್ವಜನಿಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಈ ವಿಶೇಷ ನಡಿಗೆಯಲ್ಲಿ ಆಕಾಶವಾಣಿ ಸಿಬ್ಬಂದಿ, ಕ್ರೀಡಾಪಟುಗಳು ಹಾಗೂ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

---

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಭಾರತದ ಸರ್ವೋಚ್ಚ ನ್ಯಾಯಾಲಯ 'ಸಮಾಧಾನ ಸಮಾರೋಹ-೨೦೨೬' ಎಂಬ ವಿಶೇಷ ಲೋಕ ಅದಾಲತ್‌ಅನ್ನು ಆಗಸ್ಟ್ ೧೧, ೧೨ ಮತ್ತು ೧೩ ರಂದು ಮೂರು ದಿನಗಳ ಕಾಲ ಹಮ್ಮಿಕೊಂಡಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ಅನು ಸಿವರಾಮನ್ ತಿಳಿಸಿದ್ದಾರೆ

ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು ೪ ಸಾವಿರದ ೩೨೮ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳನ್ನು ಸಂಧಾನಕ್ಕಾಗಿ ಗುರುತಿಸಿ ಈ ವಿಶೇಷ ಲೋಕ ಅದಾಲತ್ ಆಯೋಜಿಸಿದ್ದು, ಆಸಕ್ತಿವುಳ್ಳವರು ಸುಪ್ರೀಂ ಕೋರ್ಟಿನಲ್ಲಿ ಬಾಕಿ ಇರುವ ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ನೋಂದಣಿಗೆ ಸಹ ಅವಕಾಶ ಕಲ್ಪಿಸಲಾಗಿದೆ ಎಂದರು.

---

ಬ್ಯಾಂಕುಗಳಲ್ಲಿ ಚಿನ್ನದ ಸಾಲ ಪಡೆಯಲು ಸಿಬಿಲ್ ಸ್ಕೋರ್ ಮತ್ತು ಆದಾಯ ಪ್ರಮಾಣಪತ್ರವನ್ನು ಕಡ್ಡಾಯಗೊಳಿಸಿರುವ ಭಾರತೀಯ ರಿಸರ್ವ್ ಬ್ಯಾಂಕ್‌ನ ಹೊಸ ನಿಯಮಗಳ ವಿರುದ್ಧ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಅಸಮಾಧಾನ ವ್ಯಕ್ತಪಡಿಸಿದೆ.

ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ನೇತೃತ್ವದ ನಿಯೋಗ ಬೆಂಗಳೂರಿನ ಆರ್‌ಬಿಐ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸುದೀರ್ಘ ಸಭೆ ನಡೆಸಿ, ಈ ರೈತ ವಿರೋಧಿ ಕ್ರಮಗಳನ್ನು ಕೂಡಲೇ ರದ್ದುಗೊಳಿಸುವಂತೆ ಒತ್ತಾಯಿಸಿ ಮನವಿ ಸಲ್ಲಿಸಿತು. ಆಪತ್ಕಾಲದಲ್ಲಿ ರೈತರಿಗೆ ಆಸರೆಯಾಗುತ್ತಿದ್ದ ಚಿನ್ನದ ಸಾಲಕ್ಕೆ ಇಂತಹ ಕಠಿಣ ನಿರ್ಬಂಧ ಹೇರಿರುವುದು ಅವರನ್ನು ಖಾಸಗಿ ಲೇವಾದೇವಿದಾರರ ಸುಳಿಗೆ ಸಿಲುಕಿಸುವ ತಂತ್ರವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಸಭೆಯಲ್ಲಿ ಪ್ರಮುಖವಾಗಿ ಸಾಲ ತೀರಿಸದ ರೈತರ ಆಸ್ತಿ ಜಪ್ತಿ ಮಾಡುವ 'ಸರಫೇಸಿ' ಕಾಯ್ದೆ ರದ್ದತಿ, ಕೃಷಿ ಸಾಲಗಳಿಗೆ ಸೇವಾ ಶುಲ್ಕ ವಿನಾಯಿತಿ ಮತ್ತು ರೈತರ ಮಕ್ಕಳ ಶೈಕ್ಷಣಿಕ ಸಾಲಕ್ಕೆ ಸಿಬಿಲ್ ಸ್ಕೋರ್ ಪರಿಗಣಿಸಬಾರದು ಎಂಬ ಬೇಡಿಕೆಗಳನ್ನು ಮಂಡಿಸಲಾಯಿತು. ಅಲ್ಲದೆ, ಸರ್ಕಾರದ ಸಬ್ಸಿಡಿ ಹಣವನ್ನು ಬ್ಯಾಂಕುಗಳು ಸಾಲದ ಖಾತೆಗೆ ಜಮೆ ಮಾಡಿಕೊಳ್ಳುವುದನ್ನು ತಡೆಯಲು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಯಿತು. ಈ ಸಮಸ್ಯೆಗಳ ಕುರಿತು ಕೇಂದ್ರ ಕಚೇರಿಗೆ ವರದಿ ನೀಡಿ ಕ್ರಮ ಕೈಗೊಳ್ಳುವುದಾಗಿ ಆರ್‌ಬಿಐ ಅಧಿಕಾರಿಗಳು ಭರವಸೆ ನೀಡಿದ್ದಾರೆ.

---

ನಾಡಿನ ಹಿರಿಯ ಪತ್ರಕರ್ತ ಪ್ರಹ್ಲಾದ್ ಕುಳಲಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ದುಃಖ ವ್ಯಕ್ತಪಡಿಸಿದ್ದಾರೆ.

೧೯೫೬ರಲ್ಲಿ ಪತ್ರಕರ್ತರಾಗಿ ತಮ್ಮ ವೃತ್ತಿಜೀವನವನ್ನು ಆರಂಭಿಸಿದ್ದ ಪ್ರಹ್ಲಾದ್ ಅವರು, ಕಳೆದ ಆರು-ಏಳು ದಶಕಗಳ ಕಾಲ ಪತ್ರಿಕಾರಂಗ ಮತ್ತು ಸಾಮಾಜಿಕ ಮೌಲ್ಯಗಳಿಗೆ ಬದ್ಧರಾಗಿ ಸುದೀರ್ಘ ಸೇವೆ ಸಲ್ಲಿಸಿದ್ದರು. ಅವರ ನಿಧನದಿಂದ ಪತ್ರಿಕಾರಂಗ ಹಾಗೂ ಸಮಾಜ ಒಬ್ಬ ಹಿರಿಯ ಮಾರ್ಗದರ್ಶಕರನ್ನು ಕಳೆದುಕೊಂಡು ಬಡವಾಗಿದೆ ಎಂದು ಮುಖ್ಯಮಂತ್ರಿ ಸ್ಮರಿಸಿದ್ದಾರೆ.

---

ಸಾರ್ವಜನಿಕರಿಗೆ ಗೃಹಬಳಕೆ ಗ್ಯಾಸ್ ಸಿಲಿಂಡರ್‌ಗಳನ್ನು ಸಮರ್ಪಕವಾಗಿ ಹಾಗೂ ನಿಗದಿತ ದರದಲ್ಲಿ ವಿತರಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಗ್ಯಾಸ್ ವಿತರಣಾ ಸಂಸ್ಥೆಗಳ ಪ್ರತಿನಿಧಿಗಳಿಗೆ ಸೂಚನೆ ನೀಡಿದ್ದಾರೆ.

ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗ್ಯಾಸ್ ವಿತರಣಾ ಸಂಸ್ಥೆಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗೃಹಬಳಕೆ ಸಿಲಿಂಡರ್‌ಗಳನ್ನು ಅನಧಿಕೃತವಾಗಿ ಮಾರಾಟ ಮಾಡುವುದು, ಹೆಚ್ಚುವರಿ ದರ ವಸೂಲಿ ಮಾಡುವುದು ಸೇರಿದಂತೆ ಯಾವುದೇ ಅಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಎಚ್ಚರಿಸಿದರು.

---

ಅಭಿವೃದ್ಧಿ ಹೆಸರಿನಲ್ಲಿ ಯಾವುದೇ ಕಾರಣಕ್ಕೂ ಮರಗಳನ್ನು ಕಡಿಯುವುದಿಲ್ಲ ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ.

ಮೈಸೂರು - ಬೆಂಗಳೂರು ಹೊರವರ್ತುಲ ರಸ್ತೆ ಬಳಿ ಇಂದು ಮೇಲ್ಸೇತುವೆ ಕಾಮಗಾರಿಗೂ ಮುನ್ನ ಸ್ಥಳ ಪರಿಶೀಲನೆ ನಡೆಸಿ ಹಿರಿಯ ಅಧಿಕಾರಿಗಳೊಡನೆ ಚರ್ಚೆ ನಡೆಸಿದರು.

ನಂತರ ಮಾತನಾಡಿದ ಅವರು, ರಸ್ತೆ ಒತ್ತಡ ಕಡಿಮೆ ಮಾಡಲು ೭೦೦ಕೋಟಿ ರೂಪಾಯಿಗಳಲ್ಲಿ ಮೈಸೂರು ಜಿಲ್ಲೆಯಲ್ಲಿ ವಿವಿದೆಡೆ ಮೇಲ್ಸೇತುವೆ ನಿರ್ಮಾಣ ಮಾಡಲಾಗುತ್ತಿದೆ. ಕಾಮಗಾರಿಗೂ ಮುನ್ನ ಗಿಡ-ಮರಗಳ ರಕ್ಷಣೆಗೆ ಒತ್ತು ನೀಡಲಾಗಿದ್ದು, ಈ ಮೇಲ್ಸೇತುವೆ ಯೋಜನೆಯಲ್ಲಿ ಎರಡು ಬದಿ ೧೫೦ಕ್ಕೂ ಹೆಚ್ಚು ಮರಗಳು ಕಂಡುಬಂದಿವೆ. ಯಾವುದೇ ಕಾರಣಕ್ಕೂ ಈ ಮರಗಳನ್ನು ಕಡಿಯುವುದಿಲ್ಲ, ಶೇಕಡ ೯೦ ರಷ್ಟು ಮರಗಳನ್ನು ಉಳಿಸಲು ಸಲಹೆ ಸೂಚನೆ ನೀಡಲಾಗಿದೆ, ಪರಿಸರವಾದಿಗಳು ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು.

---

ಇನ್ನು ಹವಾವರ್ತಮಾನ

ರಾಜ್ಯದ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದ್ದು, ಕರಾವಳಿಯಾದ್ಯಂತ ಒಣಹವೆ ಇತ್ತು. ಕೊಪ್ಪಳ ಜಿಲ್ಲೆಯ ಕುಕನೂರಿನಲ್ಲಿ ೭ ಸೆಂಟಿಮೀಟರ್ ಮಳೆಯಾಗಿದೆ.

ಉಳಿದಂತೆ ಪ್ರಮುಖವಾಗಿ ಯಾದಗಿರಿ ಜಿಲ್ಲೆಯ ಗುರುಮಿಠಕಲ್‌ನಲ್ಲಿ ೫ ಹಾಗೂ ಮೈಸೂರಿನ ಸರಗೂರಿನಲ್ಲಿ ೪ ಸೆಂಟಿಮೀಟರ್ ಮಳೆಯಾಗಿದೆ.

ರಾಜ್ಯದ ಕಲಬುರಗಿಯಲ್ಲಿ ಗರಿಷ್ಠ ೪೧ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ನಾಳೆ ಕರಾವಳಿಯ ಹಲವೆಡೆ, ಉತ್ತರ ಹಾಗೂ ದಕ್ಷಿಣ ಒಳನಾಡಿನ ಒಂದೆರಡು ಕಡೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ, ಕೆಲವೆಡೆ ಹಗುರದಿಂದ ಸಾಧಾರಣ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಗರಿಷ್ಠ ೩೩ ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

_________ ಮುಕ್ತಾಯ ________